**ಕ್ರಿ.ಎಂ.ಸಿ ನಂ. 36/2026, ಪಿಡಬ್ಲೂ-1**

**ಸಾಕ್ಷಿಯನ್ನು ದಿನಾಂಕ: 29-07-2026 ರಂದು ಪುನಃ ಕರೆಸಿ ಪ್ರಮಾಣ ವಚನ ಬೋಧಿಸಲಾಯಿತು.**

**ಮುಖ್ಯ ವಿಚಾರಣೆಃ ಅರ್ಜಿದಾರ ಪರ ಶ್ರೀ ಮತಿ ಎಂ.ಬಿ.ಎಸ್ , ವಕೀಲರಿಂದಃ**

ನನ್ನ ಮುಖ್ಯ ವಿಚಾರಣೆಯ ಸಲುವಾಗಿ ನಾನು ಸಲ್ಲಿಸಿದ ಪ್ರಮಾಣ ಪತ್ರವನ್ನು ನಾನು ಓದಿ ವಕೀಲರಿಗೆ ಹೇಳಿ ಬರೆಸಿರುತ್ತೇನೆ. ಅದರಲ್ಲಿರುವ ಸಹಿಯು ನನ್ನದಾಗಿರುತ್ತದೆ. ಅದರಲ್ಲಿರುವ ಎಲ್ಲಾ ಅಂಶಗಳು ನನಗೆ ತಿಳಿದಿರುತ್ತದೆ.

**ನಾನು ಈ ಕೆಳಕಂಡ ದಾಖಲೆಗಳನ್ನು ಹಾಜರು ಪಡಿಸಿ ನಿಶಾನೆಯಾಗಿ ಗುರುತಿಸಿಕೊಂಡಿರುತ್ತೇನೆ.**

1. ಪ್ರತಿವಾದಿ ನೀಡಿದ ಹಿಂಬರಹ ನಿಪಿ-1 ಎಂದು ಗುರುತಿಸಲಾಯಿತು.
2. ಆಧಾರ್ ಕಾರ್ಡಿನ ನೋಟರಿ ಪ್ರತಿ ಮೂಲ ಪ್ರತಿಯೊಂದಿಗೆ ತಾಳೆ ಮಾಡಿ ನೋಡಿ ನೋಟರಿ ಪ್ರತಿಯನ್ನು ನಿಪಿ-2 ಎಂದು ಗುರುತಿಸಲಾಯಿತು.
3. ಪಾಸ್ ಪೊರ್ಟಿನ ನೋಟರಿ ಪ್ರತಿಯನ್ನು ಮೂಲ ಪ್ರತಿಯೊಂದಿಗೆ ತಾಳೆ ಮಾಡಿ ನೋಡಿ ನೋಟರಿ ಪ್ರತಿಯನ್ನು ನಿಪಿ-3 ಎಂದು ಗುರುತಿಸಲಾಯಿತು.

**(ಪಾಟೀಸವಾಲುಃ ಪ್ರತಿವಾದಿ ಏಕಪಕ್ಷೀಯ , ಪಾಟೀಸವಾಲು ಇಲ್ಲ )**

ನನ್ನ ಉಕ್ತಲೇಖನದಂತೆ ತೆರೆದ ನ್ಯಾಯಾಲಯದಲ್ಲಿ ಬೆರಳಚ್ಚು ಮಾಡಲಾಯಿತು .

ಓದಿ ಹೇಳಿ ಕೇಳಿ ಸರಿ ಇದೆ

ಸಹಿ/-

ವ್ಯ ನ್ಯಾ ಮತ್ತು ಪ್ರ.ದ.ನ್ಯಾದಂ.
ಮೂಡಬಿದಿರೆ